Akashvani : Bengaluru
National Bulletin In Kannada
30.08.2025 : 7.35AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

*******

ಮುಖ್ಯಾಂಶಗಳು:

1. ಭಾರತ - ಜಪಾನ್ ನಡುವೆ ಒಂದು ದಶಕದ ಸಮಗ್ರ ಯೋಜನೆ ಅನಾವರಣ; ತಂತ್ರಜ್ಞಾನ, ಆರ್ಥಿಕ ಕಾರ್ಯತಂತ್ರದ ಸಹಕಾರ ಬಲವರ್ಧನೆಗೆ ಒತ್ತು
2. ಪ್ರಸಕ್ತ ಆರ್ಥಿಕ ವರ್ಷದ ಏಪ್ರಿಲ್‌ನಿಂದ ಜೂನ್ ವರೆಗಿನ ತ್ರೈಮಾಸಿಕದಲ್ಲಿ ಭಾರತದ ನೈಜ ಜಿಡಿಪಿ ಶೇಕಡ ೭.೮ರಷ್ಟು ಬೆಳವಣಿಗೆ ಅಂದಾಜು
3. ವಿಶ್ವಸಂಸ್ಥೆ ಸಾಮಾನ್ಯ ಸಭೆಗಾಗಿ ಪ್ಯಾಲಿಸ್ತೇನಿಯನ್ ಪ್ರಾಧಿಕಾರದ ಅಧ್ಯಕ್ಷ ಹಾಗೂ ಸದಸ್ಯರಿಗೆ ವೀಸಾ ನಿರಾಕರಿಸಿದ ಅಮೆರಿಕ
4. ೨೦೩೦ರಲ್ಲಿ ಕಾಮನ್‌ವೆಲ್ತ್ ಕ್ರೀಡಾಕೂಟದ ಆಯೋಜನೆಗೆ ಅಧಿಕೃತವಾಗಿ ಪ್ರಸ್ತಾವನೆ ಸಲ್ಲಿಸಿದ ಭಾರತ

********

ಟೋಕಿಯೋದಲ್ಲಿ ನಿನ್ನೆ ನಡೆದ ಶೃಂಗಸಭೆಯ ಬಳಿಕ ಪ್ರಧಾನಿ ನರೇಂದ್ರ ಮೋದಿ ಮತ್ತು ಜಪಾನ್ ಪ್ರಧಾನಿ ಶಿಗೆರು ಇಶಿಬಾ, ಉಭಯ ರಾಷ್ಟ್ರಗಳ ನಡುವಿನ ತಂತ್ರಜ್ಞಾನ, ಆರ್ಥಿಕ ಮತ್ತು ಕಾರ್ಯತಂತ್ರದ ಸಹಕಾರವನ್ನು ಮತ್ತಷ್ಟು ಬಲಪಡಿಸಲು ಒಂದು ದಶಕದ ಸಮಗ್ರ ಯೋಜನೆಯನ್ನು ಅನಾವರಣಗೊಳಿಸಿದರು. ಜಂಟಿ ಸುದ್ದಿಗೋಷ್ಠಿಯಲ್ಲಿ ಪ್ರಧಾನಿ, ಮುಂದಿನ ಹತ್ತು ವರ್ಷಗಳಲ್ಲಿ ಹೂಡಿಕೆ, ನಾವೀನ್ಯತೆ, ಪರಿಸರ, ತಂತ್ರಜ್ಞಾನ, ಆರೋಗ್ಯ, ಜನ ಸಂಪರ್ಕ ಕ್ಷೇತ್ರವನ್ನು ಕೇಂದ್ರೀಕರಿಸಿದ ಯೋಜನೆ ರೂಪಿಸಲಾಗಿದೆ. ಜಪಾನ್ ಮುಂದಿನ ಹತ್ತು ವರ್ಷಗಳಲ್ಲಿ ಭಾರತದಲ್ಲಿ ೧೦ ಟ್ರಿಲಿಯನ್ ಯೆನ್ ಹೂಡಿಕೆ ಮಾಡುವ ಗುರಿ ಹೊಂದಿದೆ ಎಂದು ಹೇಳಿದರು.

**ಧ್ವನಿ***

ಭದ್ರತೆ ಮತ್ತು ಸಾಮರಸ್ಯದ ಬಗ್ಗೆ ಉಭಯ ರಾಷ್ಟ್ರಗಳು ತೀವ್ರ ಚಿಂತನೆ ನಡೆಸಿದ್ದು, ಸೇನಾ ಮತ್ತು ನೌಕಾ ಭದ್ರತೆಯಲ್ಲಿ ಸಹಕಾರವನ್ನು ವಿಸ್ತರಿಸಲು ಒಮ್ಮತ ಸೂಚಿಸಿವೆ. ಇಸ್ರೋ ಮತ್ತು ಜಾಕ್ಸಾ ನಡುವೆ ಚಂದ್ರಯಾನ-೫ ಯೋಜನೆಗೆ ಒಪ್ಪಂದವಾಗಿದ್ದು, ಇದು ಭವಿಷ್ಯದ ಅಂತರಿಕ್ಷ ಸಾಧನೆಗೆ ನಿದರ್ಶನವಾಗಲಿದೆ. ಜಪಾನ್ ಪ್ರಧಾನಿ ಇಶಿಬಾ, ಜಪಾನ್‌ಗೆ ಭಾರತದ ಕೌಶಲ್ಯಭರಿತ ಪ್ರತಿಭೆಗಳ ಹೆಚ್ಚಿನ ಒಳಹರಿವಿಗಾಗಿ ಕರೆ ನೀಡಿದರು. ಉಭಯ ರಾಷ್ಟ್ರಗಳು ಗಣಕಯಂತ್ರ ಭಾಷಾ ಮಾದರಿ, ದತ್ತಾಂಶ ಕೇಂದ್ರ ಮತ್ತು ಭಾರತ-ಜಪಾನ್ ಎಐ ಉಪಕ್ರಮ ಘೋಷಿಸಿವೆ. ಪ್ರಧಾನಿ ಅವರ ಜಪಾನ್ ಪ್ರವಾಸದ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ, ಪ್ರಧಾನಿ ನರೇಂದ್ರ ಮೋದಿ ಹಾಗು ಜಪಾನ್ ಪ್ರಧಾನಿ ಇಶಿಬಾ ಸುಮಾರು ಎರಡೂವರೆ ಗಂಟೆಗಳ ಅವಧಿಯಲ್ಲಿ ನಿಯೋಗ ಮಟ್ಟದ ಮಾತುಕತೆಗಳ ಜೊತೆಗೆ ಹಲವು ಒಪ್ಪಂದಗಳಿಗೆ ಸಹಿ ಹಾಕುವುದಕ್ಕೆ ಸಾಕ್ಷಿಯಾಗಿದ್ದಾರೆ. ದ್ವಿಪಕ್ಷೀಯ ವಿಷಯಗಳು ಸೇರಿದಂತೆ ಉಭಯ ಪ್ರಧಾನಿಗಳ ನಡುವೆ ಪ್ರಾದೇಶಿಕ ಹಾಗೂ ಜಾಗತಿಕ ಪರಿಸ್ಥಿತಿಯ ಕುರಿತು ಚರ್ಚೆ ನಡೆದಿದೆ. ಅಂತಾರಾಷ್ಟ್ರೀಯ ವ್ಯವಸ್ಥೆಯಲ್ಲಿ ಭಾರತ ಹಾಗೂ ಜಪಾನ್ ನಡುವಿನ ಸಂಬಂಧ ಸದೃಢತೆಯ ಸ್ತಂಭವಾಗಿರಲಿದೆ ಎಂದು ಹೇಳಿದರು. ಕಾನೂನು ಆಧಾರಿತ ಮುಕ್ತ ಶಾಂತಿಯುತ ಮತ್ತು ಆರ್ಥಿಕವಾಗಿ ಅಭಿವೃದ್ಧಿ ಹೊಂದಿದ ಇಂಡೋ - ಪೆಸಿಫಿಕ್ ಪ್ರದೇಶದ ಹಂಚಿಕೆಯ ದೃಷ್ಟಿಕೋನಕ್ಕೆ ಉತ್ತೇಜನ ನೀಡಲು ಉಭಯ ರಾಷ್ಟ್ರಗಳು ಜಂಟಿ ರಕ್ಷಣಾ ಸಹಕಾರಕ್ಕೂ ಒಮ್ಮತ ಸೂಚಿಸಿವೆ ಎಂದು ಮಾಹಿತಿ ನೀಡಿದರು.

***ಧ್ವನಿ***

ಪ್ರಧಾನಿ ನರೇಂದ್ರ ಮೋದಿ, ಎರಡು ದಿನಗಳ ಜಪಾನ್ ಭೇಟಿಯ ಹಿನ್ನೆಲೆಯಲ್ಲಿ ಟೋಕಿಯೋ ತಲುಪಿದ್ದು, ಜಪಾನ್ ಪ್ರವಾಸದ ಬಳಿಕ ಅವರು ಟಿಯಾಂಜಿನ್‌ನಲ್ಲಿ ನಡೆಯಲಿರುವ ಶಾಂಘೈ ಸಹಕಾರ ಸಂಘ ಎಸ್‌ಸಿಒ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಚೀನಾಗೆ ಪ್ರವಾಸ ಕೈಗೊಳ್ಳಲಿದ್ದಾರೆ.

********

೨೦೨೫-೨೬ರ ಆರ್ಥಿಕ ವರ್ಷದ ಏಪ್ರಿಲ್‌ನಿಂದ ಜೂನ್ ವರೆಗಿನ ತ್ರೈಮಾಸಿಕದಲ್ಲಿ ಭಾರತದ ಜಿಡಿಪಿ ಶೇಕಡ ೭.೮ರಷ್ಟು ಏರಿಕೆ ಕಾಣಲಿದೆ ಎಂದು ಅಂದಾಜಿಸಲಾಗಿದೆ. ಕಳೆದ ಆರ್ಥಿಕ ವರ್ಷದ ನಾಲ್ಕನೇ

ತ್ರೈಮಾಸಿಕದಲ್ಲಿ ಜಿಡಿಪಿ ಶೇಕಡ ೭.೪ರಷ್ಟು ಏರಿಕೆಯಾಗಿತ್ತು. ಹಿಂದಿನ ಆರ್ಥಿಕ ವರ್ಷದ ಪ್ರಥಮ ತ್ರೈಮಾಸಿಕದಲ್ಲಿ ಇದು ಶೇಕಡ ೬.೫ರಷ್ಟಿತ್ತು. ಅಂಕಿ-ಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯ ಬಿಡುಗಡೆ ಮಾಡಿದ ಪ್ರಥಮ ತ್ರೈಮಾಸಿಕ ಜಿಡಿಪಿ ಅಂದಾಜು ವರದಿ ಈ ಕುರಿತು ಪ್ರಕಟಿಸಿದೆ.

********

ಮುಂದಿನ ತಿಂಗಳು ನ್ಯೂಯಾರ್ಕ್‌ನಲ್ಲಿ ನಡೆಯಲಿರುವ ವಿಶ್ವಸಂಸ್ಥೆ ಸಾಮಾನ್ಯ ಸಭೆಗಾಗಿ ಪ್ಯಾಲಿಸ್ತೇನಿಯನ್ ಪ್ರಾಧಿಕಾರದ ಅಧ್ಯಕ್ಷ ಮೊಹಮ್ಮದ್ ಅಬ್ಬಾಸ್ ಅವರಿಗೆ ವಿಸಾ ನೀಡುವುದಿಲ್ಲ ಎಂದು ಅಮೆರಿಕ ಘೋಷಿಸಿದೆ. ಅಧಿವೇಶನದಲ್ಲಿ ಅಮೆರಿಕದ ಅನೇಕ ಮಿತ್ರ ರಾಷ್ಟ್ರಗಳು ಪ್ಯಾಲಿಸ್ತೇನ್‌ಅನ್ನು ಸ್ವತಂತ್ರ ರಾಷ್ಟ್ರವಾಗಿ ಮಾನ್ಯತೆ ನೀಡಲು ಸಜ್ಜಾಗಿರುವ ಸಂದರ್ಭದಲ್ಲಿ ಈ ಬೆಳವಣಿಗೆ ನಡೆದಿದೆ. ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೋ ರುಬಿಯೋ ಅವರ ನಿರ್ದೇಶನದಂತೆ ಪ್ಯಾಲಿಸ್ತೇನಿಯನ್ ಪ್ರಾಧಿಕಾರ - ಪಿಎ ಮತ್ತು ಪ್ಯಾಲಿಸ್ತೇನ್ ವಿಮೋಚನಾ ಸಂಸ್ಥೆ - ಪಿಎಲ್‌ಒ ಸದಸ್ಯರಿಗೆ ವೀಸಾಗಳನ್ನು ನಿರಾಕರಿಸಿ, ರದ್ದುಗೊಳಿಸಲಾಗುತ್ತಿದೆ ಎಂದು ಪ್ರಕಟಣೆ ತಿಳಿಸಿದೆ. ಇದು ಅಮೆರಿಕಾದ ರಾಷ್ಟ್ರೀಯ ಭದ್ರತಾ ಹಿತಾಸಕ್ತಿಗಾಗಿ ತೆಗೆದುಕೊಳ್ಳಲಾದ ಕ್ರಮವಾಗಿದ್ದು, ಪಿಎ ಮತ್ತು ಪಿಎಲ್‌ಒ ತಮ್ಮ ಬದ್ಧತೆಗಳನ್ನು ಪಾಲಿಸದ ಕಾರಣ ಅವರನ್ನು ಹೊಣೆಗಾರರನ್ನಾಗಿ ಮಾಡಲಾಗಿದೆ ಎಂದು ಅಮೆರಿಕ ಪ್ರಕಟಣೆಯಲ್ಲಿ ತಿಳಿಸಿದೆ. ಮಾರ್ಕೋ ರುಬಿಯೋ, ಪ್ಯಾಲಿಸ್ತೇನ್‌ಗೆ ಅಕ್ಟೋಬರ್ ೭ರಂದು ನಡೆದ ಹಿಂಸಾಚಾರ ಸೇರಿದಂತೆ ಎಲ್ಲಾ ಭಯೋತ್ಪಾದಕ ಕೃತ್ಯಗಳನ್ನು ತಿರಸ್ಕರಿಸಬೇಕು, ಪಠ್ಯಕ್ರಮದಲ್ಲಿ ಭಯೋತ್ಪಾದನೆಯನ್ನು ಪ್ರೇರೇಪಿಸುವುದನ್ನು ನಿಲ್ಲಿಸಬೇಕು ಮತ್ತು ಅಂತಾರಾಷ್ಟ್ರೀಯ ನ್ಯಾಯಾಲಯಗಳಲ್ಲಿ ಇಸ್ರೇಲ್ ವಿರುದ್ಧ ಕಾನೂನು ಹೋರಾಟದ ಪ್ರಯತ್ನಗಳನ್ನು ಕೈಬಿಡಬೇಕು ಎಂದು ತಿಳಿಸಿದ್ದರು.

********

ಗಣೇಶೋತ್ಸವ ಸಂಭ್ರಮಾಚರಣೆಯಲ್ಲಿ ಪಾಲ್ಗೊಳ್ಳಲು ಕೈಗೊಂಡಿರುವ ಎರಡು ದಿನಗಳ ಪ್ರವಾಸಕ್ಕಾಗಿ ನಿನ್ನೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಮುಂಬೈ ತಲುಪಿದ್ದಾರೆ. ಇಂದು ಅವರು ಮುಂಬೈನ ಖ್ಯಾತ ಗಣೇಶ ಮಂಡಳಿಗಳಲ್ಲಿ ಒಂದಾದ ಲಾಲ್‌ಬಾಗ್‌ಚಾ ರಾಜಾಗೆ ಭೇಟಿ

ನೀಡಲಿದ್ದಾರೆ. ಇದೇ ವೇಳೆ ಅವರು ಬಾಂದ್ರಾ ಮತ್ತು ಅಂಧೇರಿ ಪ್ರದೇಶದಲ್ಲಿರುವ ಹಲವು ಗಣೇಶ ಮಂಡಳಗಳಿಗೆ ಭೇಟಿ ನೀಡಲಿದ್ದಾರೆ. ಪ್ರವಾಸದ ಭಾಗವಾಗಿ ಅವರು, ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರನ್ನು ಭೇಟಿ ಮಾಡಿ, ಪ್ರಸ್ತುತ ರಾಜಕೀಯ ಪರಿಸ್ಥಿತಿ, ಮರಾಠ ಪ್ರತಿಭಟನೆ ಮತ್ತು ಮುಂಬರುವ ಮಹಾರಾಷ್ಟ್ರ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಬಿಜೆಪಿಯ ಸಿದ್ಧತೆಗಳ ಕುರಿತು ಸಮಾಲೋಚನೆ ನಡೆಸಲಿದ್ದಾರೆ.

********

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್' ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ, ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೫ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಈ ಕಾರ್ಯಕ್ರಮವನ್ನು ಕೇಳಬಹುದಾಗಿದೆ.

********

೨೦೩೦ರಲ್ಲಿ ಕಾಮನ್‌ವೆಲ್ತ್ ಕ್ರೀಡಾಕೂಟವನ್ನು ಆಯೋಜಿಸುವ ಪ್ರಸ್ತಾವನೆಯನ್ನು ಭಾರತ ಅಧಿಕೃತವಾಗಿ ಸಲ್ಲಿಸಿದೆ. ಪ್ರಸ್ತಾವನೆಯನ್ನು ಕಾಮನ್‌ವೆಲ್ತ್ ಕ್ರೀಡಾ ಒಕ್ಕೂಟದ ಅಧ್ಯಕ್ಷ ಡಾ. ಡೊನಾಲ್ಡ್ ರುಕಾರೆ ಅವರಿಗೆ ಭಾರತೀಯ ಕಾಮನ್‌ವೆಲ್ತ್ ಕ್ರೀಡಾಸಂಸ್ಥೆ ಮತ್ತು ಗುಜರಾತ್ ಸರ್ಕಾರದ ಪ್ರತಿನಿಧಿಗಳಿದ್ದ ನಿಯೋಗ ಲಂಡನ್‌ನಲ್ಲಿ ಸಲ್ಲಿಸಿದೆ. ಪ್ರಸ್ತಾವನೆಯಲ್ಲಿ ಅಹಮದಾಬಾದ್‌ಅನ್ನು ಕ್ರೀಡಾಕೂಟದ ಆಥಿತ್ಯ ನಗರಿಯಾಗಿ ಪ್ರಸ್ತಾಪಿಸಲಾಗಿದೆ. ಈ ಕುರಿತಂತೆ ಮಾಧ್ಯಮಗಳಿಗೆ ಮಾಹಿತಿ ನೀಡಿರುವ ಗುಜರಾತ್ ಕ್ರೀಡಾ ಸಚಿವ ಹರ್ಷ್ ಸಾಂಘ್ವಿ, ಈ ಪ್ರಸ್ತಾವನೆ ಸುಸ್ಥಿರ ಮತ್ತು ಎಲ್ಲರನ್ನೊಳಗೊಳ್ಳುವ ಕ್ರೀಡಾಕೂಟಕ್ಕೆ ಉತ್ತೇಜನ ನೀಡುವ ಭಾರತದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಪ್ರಸ್ತಾವನೆಯನ್ನು ರಾಷ್ಟ್ರೀಯ ಕ್ರೀಡಾ ದಿನದಂದು ಸಲ್ಲಿಸಿರುವುದು

ವಿಶೇಷವಾಗಿದ್ದು, ಅದು ಭಾರತದ ಕ್ರೀಡಾ ಪರಂಪರೆ ಮತ್ತು ದೇಶದ ಯುವಕರ ಕುರಿತು ಹೊಂದಿರುವ ಭವಿಷ್ಯದ ದೃಷ್ಟಿಕೋನವನ್ನು ಎತ್ತಿ ತೋರಿಸುತ್ತದೆ ಎಂದು ತಿಳಿಸಿದರು.

****ಧ್ವನಿ**** ಹರ್ಷ್ ಸಾಂಘ್ವಿ

ಭಾರತೀಯ ಒಲಿಂಪಿಕ್ ಸಂಸ್ಥೆಯ ಅಧ್ಯಕ್ಷೆ ಪಿ.ಟಿ. ಉಷಾ ಮಾತನಾಡಿ, ಈ ಪ್ರಸ್ತಾವನೆ ಇಡೀ ರಾಷ್ಟ್ರದ ಆಕಾಂಕ್ಷೆಗಳನ್ನು ಪ್ರತಿನಿಧಿಸುತ್ತದೆ. ಅಹಮದಾಬಾದ್‌ನಲ್ಲಿ ನಡೆಯುವ ಈ ಕ್ರೀಡಾಕೂಟ ಭಾರತದ ಕ್ರೀಡಾ ಸಾಮರ್ಥ್ಯವನ್ನು ಮಾತ್ರವಲ್ಲದೆ, ದೇಶದ ಕ್ರೀಡಾ ಸಂಸ್ಕೃತಿಯನ್ನು ಬಲಪಡಿಸುವ ಮೌಲ್ಯಗಳಾದ ಗೌರವ ಮತ್ತು ಒಳಗೊಳ್ಳುವಿಕೆಯನ್ನು ಪ್ರದರ್ಶಿಸಲಿದೆ ಎಂದು ಹೇಳಿದರು.

********

ಪ್ಯಾರಿಸ್‌ನಲ್ಲಿ ನಡೆಯುತ್ತಿರುವ ವಿಶ್ವ ಬ್ಯಾಡ್ಮಿಂಟನ್ ಚಾಂಪಿಯನ್ ಶಿಪ್‌ನ ಸೆಮಿಫೈನಲ್‌ಗೆ ಪುರುಷರ ಡಬಲ್ಸ್ ಜೋಡಿ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಲಗ್ಗೆ ಇಟ್ಟಿದ್ದಾರೆ. ಭಾರತದ ಜೋಡಿ ವಿಶ್ವದ ೬ ನೇ ಶ್ರೇಯಾಂಕದ ಮಲೇಷ್ಯಾದ ಆರನ್ ಚಿಯಾ ಮತ್ತು ಸೋಹ್ ವೂಯಿ ಯಿಕ್ ಜೋಡಿಯನ್ನು ೨೧-೧೨, ೨೧-೧೯ ಸೆಟ್‌ಗಳಿಂದ ಮಣಿಸಿದೆ. ಇದಕ್ಕೂ ಮೊದಲು, ಸಾತ್ವಿಕ್ ಮತ್ತು ಚಿರಾಗ್ ೨೦೨೨ ರಲ್ಲಿ ಟೋಕಿಯೊದಲ್ಲಿ ನಡೆದ ವಿಶ್ವ ಚಾಂಪಿಯನ್‌ಶಿಪ್‌ನಲ್ಲಿ ಕಂಚಿನ ಪದಕ ಗೆದ್ದಿದ್ದರು. ಭಾರತೀಯ ಜೋಡಿ ಇಂದು ನಡೆಯುವ ಸೆಮಿಫೈನಲ್‌ನಲ್ಲಿ ವಿಶ್ವದ ೧೧ ನೇ ಶ್ರೇಯಾಂಕದ ಲಿ ಯಿಯು ಮತ್ತು ಚೀನಾದ ಬೊ ಯಾಂಗ್ ಚೆನ್ ಅವರನ್ನು ಎದುರಿಸಲಿದೆ.

********

ಕರಾವಳಿ ಕರ್ನಾಟಕ, ಹಿಮಾಚಲ ಪ್ರದೇಶ, ಪಂಜಾಬ್ ಮತ್ತು ಉತ್ತರಾಖಂಡದ ಪ್ರತ್ಯೇಕ ಸ್ಥಳಗಳಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈಶಾನ್ಯ, ಬಿಹಾರ, ರಾಜಸ್ಥಾನ, ಗುಜರಾತ್, ದೆಹಲಿ, ಮಧ್ಯಪ್ರದೇಶ, ಮಹಾರಾಷ್ಟ್ರ ಮತ್ತು ದಕ್ಷಿಣ ಭಾರತದ ಕೆಲವು ಭಾಗಗಳಲ್ಲಿ ಇಂದು ಭಾರಿ ಮಳೆಯಾಗುವ ಸಾಧ್ಯತೆ ಇದೆ. ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳು, ಬಿಹಾರ, ಜಮ್ಮು-ಕಾಶ್ಮೀರ-ಲಡಾಖ್-ಗಿಲ್ಗಿಟ್-ಬಾಲ್ಟಿಸ್ತಾನ್-ಮುಜಫರಾಬಾದ್, ಜಾರ್ಖಂಡ್, ಒಡಿಶಾ, ತೆಲಂಗಾಣ ಮತ್ತು ಪಶ್ಚಿಮ ಬಂಗಾಳ ಮತ್ತು ಸಿಕ್ಕಿಂನ ಪ್ರತ್ಯೇಕ ಸ್ಥಳಗಳಲ್ಲಿ ಇಂದು ಮಿಂಚು ಮತ್ತು ಬಿರುಗಾಳಿಯೊಂದಿಗೆ ಗುಡುಗು ಸಹಿತ

ಮಳೆಯಾಗುವ ಸಾಧ್ಯತೆಯಿದೆ.ಮುಂದಿನ ಐದು ದಿನಗಳಲ್ಲಿ ವಾಯುವ್ಯ ಭಾರತದಲ್ಲಿ ಭಾರೀ ಮಳೆ ಮುಂದುವರಿಯುವ ಸಾಧ್ಯತೆಯಿದೆ, ಹಿಮಾಚಲ ಪ್ರದೇಶದಲ್ಲಿ ನಾಳೆಯವರೆಗೆ ಮತ್ತು ಉತ್ತರಾಖಂಡದಲ್ಲಿ ಸೆಪ್ಟೆಂಬರ್ ೨ ರವರೆಗೆ ಪ್ರತ್ಯೇಕ ಭಾರೀ ಮಳೆಯಾಗುವ ಸಾಧ್ಯತೆಯಿದ.

********

ನಿನ್ನೆ ಥಿಂಪುವಿನಲ್ಲಿ ನಡದ ೧೭ ವರ್ಷದೊಳಗಿನವರ ಸ್ಯಾಫ್ ಮಹಿಳಾ ಫುಟ್ಬಾಲ್ ಚಾಂಪಿಯನ್‌ಶಿಪ್ ಪಂದ್ಯದಲ್ಲಿ, ನೇಪಾಳವನ್ನು ೫-೦ ಗೋಲುಗಳಿಂದ ಸೋಲಿಸಿ, ಭಾರತವು ೨೦೨೫ರ ಪ್ರಶಸ್ತಿಯನ್ನು ಗೆದ್ದುಕೊಂಡಿತು.ಈ ಮಹತ್ವದ ಗೆಲುವಿನೊಂದಿಗೆ, ೧೫ ಅಂಕಗಳನ್ನು ಗಳಿಸಿ, ಅಂಕಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದೆ. ಟ್ರೋಫಿಯನ್ನು ಭದ್ರಪಡಿಸಿಕೊಂಡ ನಂತರ, ಭಾರತವು ನಾಳೆ ಬಾಂಗ್ಲಾದೇಶ ವಿರುದ್ಧ ಚಾಂಪಿಯನ್‌ಶಿಪ್‌ನ ಕೊನೆಯ ಪಂದ್ಯದಲ್ಲಿ ಸೆಣಸಾಟ ನಡೆಸಲಿದೆ.

********